# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2003 (2367)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ವಿಷಯ : ಮೈಸೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳ ಭರ್ತಿ ಬಗ್ಗೆ

(ಅ) ಮೈಸೂರು ವಿಶ್ವವಿದ್ಯಾನಿಲಯ, ಸ್ನಾತಕೋತ್ತರ ಕೇಂದ್ರಗಳು ಹಾಗೂ ಘಟಕ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ ಇನ್ನಿತರೆ ಕಾರಣಗಳಿಂದ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ, ಸಹ ಪ್ರಾಧ್ಯಾಪಕರ ಮತ್ತು ಪ್ರಾಧ್ಯಾಪಕರ ಹುದ್ದೆಗಳ ಸಂಖ್ಯೆ ಎಷ್ಟು; (ವಿಷಯವಾರು ಪ್ರತ್ಯೇಕವಾಗಿ ವಿವರಗಳನ್ನು ಒದಗಿಸುವುದು)

(ಆ) ಸದರಿ ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಭರ್ತಿ ಮಾಡಬೇಕಾಗಿರುವ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು; (ವಿಷಯವಾರು ಪ್ರತ್ಯೇಕವಾಗಿ ವಿವರಗಳನ್ನು ನೀಡುವುದು)

(ಇ) ದೀರ್ಘಕಾಲದಿಂದ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳದಿರುವುದರಿಂದ ಸಂಶೋಧನೆಗೆ, ಶಿಕ್ಷಣಕ್ಕೆ ಹಾಗೂ ಯು.ಜಿ.ಸಿ ಅನುದಾನದ ಬಳಕೆಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಯಾವ ನಿಯಮಾವಳಿ ಅನುಸರಿಸಿ ಭರ್ತಿ ಮಾಡಿಕೊಳ್ಳಲಾಗುವುದು ? (ವಿವರಗಳನ್ನು ನೀಡುವುದು)